# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1445

ವಿಧಾನ ಪರಿಷತ್ತು ಸದಸ್ಯರ ಹೆಸರು : ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 16.03.2026

ಉತ್ತರಿಸುವ ಸಚಿವರು : ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಅನರ್ಹರ ಬಿಪಿಎಲ್ ಪಡಿತರ ಚೀಟಿಗಳನ್ನು ರದ್ದು ಮಾಡುವ ಪ್ರಕ್ರಿಯೆ ನಡೆಯುತ್ತಿದ್ದು, ಬಿಪಿಎಲ್ ಕಾರ್ಡ್‌ನಿಂದ ಹೆಸರು ಕೈಬಿಟ್ಟಿರುವ ಅಥವಾ ಕಾರ್ಡ್ ರದ್ದಾದ ಕುಟುಂಬಗಳಿಗೆ ಹೊಸ ಎಪಿಎಲ್ ಕಾರ್ಡ್ ನೀಡುವ ಪ್ರಕ್ರಿಯೆ ಪ್ರಾರಂಭಿಸದಿರಲು ಕಾರಣವೇನು; ಯಾವಾಗ ಪುನರಾಂಭಿಸಲಾಗುವುದು; | ಸರ್ಕಾರದ ಆದೇಶ ಸಂಖ್ಯೆ: ಆನಾಸ 211 ಡಿಆರ್‌ಎ 2021 ದಿನಾಂಕ:29.09.2023 ರಲ್ಲಿ ಆದ್ಯತೇತರ ಪಡಿತರ ಚೀಟಿಯನ್ನು ಕೋರಿ ಸಲ್ಲಿಕೆಯಾಗಿರುವ ಅರ್ಜಿಗಳಿಗೆ ಅನುಮೋದನೆ ನೀಡುವುದನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿರುತ್ತದೆ. |
| ಆ | ಹೊಸ ಕಾರ್ಡ್ ವಿತರಣೆ ವಿಳಂಬವಾಗಿರುವುದಕ್ಕೆ ಕಾರಣವೇನು; ಈ ಮೊದಲು ಹೊಸ ಕಾರ್ಡಿಗಾಗಿ ಸಲ್ಲಿಸಲಾದ ಅರ್ಜಿಗಳಲ್ಲಿ ಇನ್ನೂ ಎಷ್ಟು ಬಾಕಿಯಿದೆ; ಅವುಗಳನ್ನು ವಿಲೇವಾರಿ ಮಾಡಲು ಸರ್ಕಾರ ಯಾವ ಕಾಲಮಿತಿಯನ್ನು ನಿಗದಿಪಡಿಸಿದೆ. | ಸರ್ಕಾರದ ಆದೇಶ ಸಂಖ್ಯೆ: ಇ-ಆನಾಸ 159 ಡಿಆರ್‌ಎ 2025 ದಿನಾಂಕ:30.10.2025 ರಲ್ಲಿ ರಾಜ್ಯದಲ್ಲಿರುವ ಅನರ್ಹ ಆದ್ಯತಾ ಪಡಿತರ ಚೀಟಿಗಳನ್ನು ಪತ್ತೆ ಹಚ್ಚಿ ಸದರಿ ಅನರ್ಹ ಆದ್ಯತಾ ಪಡಿತರ ಚೀಟಿಗಳನ್ನು ಆದ್ಯತೇತರ ಪಡಿತರ ಚೀಟಿಗಳನ್ನಾಗಿ (NPHH) ಪರಿವರ್ತಿಸಲು ಹಾಗೂ ಈ ರೀತಿ ಪರಿವರ್ತಿಸಿದ ಪ್ರಮಾಣಕ್ಕೆ ಅನುಗುಣವಾಗಿ ಅಷ್ಟೇ ಪ್ರಮಾಣದ ಆದ್ಯತಾ ಪಡಿತರ ಚೀಟಿಗಳನ್ನು (PHH) ಬಡತನ ರೇಖೆಗಿಂತ ಕೆಳಗಿರುವ ಅರ್ಹ ನಾಗರಿಕರಿಗೆ ವಿತರಿಸಲು ಆದೇಶಿಸಿದೆ. ಅದರನ್ವಯ ದಿನಾಂಕ:28-11-2025ರ ಅಂತ್ಯಕ್ಕೆ ರಾಜ್ಯದಲ್ಲಿ ಆದ್ಯತಾ ಪಡಿತರ ಚೀಟಿ ಕೋರಿ ಈಗಾಗಲೇ ಸಲ್ಲಿಸಿರುವ ಒಟ್ಟು 3,36,982 ಅರ್ಜಿಗಳ ಸ್ಥಳ ತನಿಖೆ ಕಾರ್ಯ ನಡೆಸಿ ಅರ್ಹರಿರುವ ಅರ್ಜಿದಾರರಿಗೆ ನಿಯಮಾನುಸಾರ ಆದ್ಯತಾ ಪಡಿತರ ಚೀಟಿ ವಿತರಣೆ ಮಾಡಲು ಕ್ರಮವಹಿಸಲಾಗಿರುತ್ತದೆ. |

| | | |
|---|---|---|
| ಇ | ಬಿಪಿಎಲ್ ಕಾರ್ಡ್ ರದ್ದಾದ ಪರಿಣಾಮ ಹಲವು ಕುಟುಂಬಗಳು ಉಚಿತಗ ಪಡಿತರ, ಆರೋಗ್ಯ ಸೇವೆ, ಸಹಕಾರಿ ಸಂಸ್ಥೆಗಳಲ್ಲಿ ಸಾಲ ಹಾಗೂ ಇತರ ಸರ್ಕಾರಿ ಸೌಲಭ್ಯಗಳಿಂದ ವಂಚಿತರಾಗುತ್ತಿರುವುದು ಸರ್ಕಾರದ ಗಮನದಲ್ಲಿಯೇ; ಪಡಿತರ ಚೀಟಿಯನ್ನು ವಿವಿಧ ಸೌಲಭ್ಯಗಳ ಮಾನದಂಡವಾಗಿ ಬಳಸುವುದನ್ನು ತಡೆಯುವ ಸಹಿತ ಈ ಸಮಸ್ಯೆ ನಿವಾರಣೆಗೆ ಸರ್ಕಾರ ಯಾವ ಕ್ರಮವಹಿಸಿದೆ; | ತಾತ್ಕಾಲಿಕವಾಗಿ ಆದ್ಯತೇತರ ಪಡಿತರ ಚೀಟಿಯನ್ನಾಗಿ (NPHH) ಪರಿವರ್ತಿಸಲಾದ ಪಡಿತರ ಚೀಟಿದಾರರು ಆದ್ಯತಾ ಪಡಿತರ ಚೀಟಿ ಹೊಂದಲು (PHH) ಅರ್ಹರಾಗಿದ್ದಲ್ಲಿ 45 ದಿನದೊಳಗಾಗಿ ಅಗತ್ಯ ದಾಖಲೆಗಳೊಂದಿಗೆ ಸಂಬಂಧಪಟ್ಟ ತಾಲ್ಲೂಕಿನ ತಹಶೀಲ್ದಾರರಿಗೆ ಮನವಿ ಸಲ್ಲಿಸಿದಲ್ಲಿ ಸದರಿ ಮನವಿಯನ್ನು ಪರಿಶೀಲಿಸಿ ಆದ್ಯತಾ ಪಡಿತರ ಚೀಟಿ ಹೊಂದಲು ನಿಯಮಾನುಸಾರ ಅರ್ಹರಿದ್ದಲ್ಲಿ ಅಂತಹವರ ಆದ್ಯತಾ ಪಡಿತರ ಚೀಟಿಯನ್ನು (PHH) ಮರುಸ್ಥಾಪಿಸಲು ಕ್ರಮವಹಿಸಲಾಗುತ್ತದೆ. ಆದರಂತೆ ಒಂದು ವೇಳೆ ಅರ್ಹ ಫಲಾನುಭವಿಯ ಆದ್ಯತಾ ಪಡಿತರ ಚೀಟಿಯನ್ನು ರದ್ದುಪಡಿಸಿದಲ್ಲಿ ಸಂಬಂಧಪಟ್ಟ ತಹಶೀಲ್ದಾರರಿಗೆ ಮನವಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. |
| ಈ | ಮನೆ ನಿರ್ಮಾಣ, ಮಕ್ಕಳ ವಿದ್ಯಾಭ್ಯಾಸಕ್ಕಾಗಿ ಬ್ಯಾಂಕ್ ಸಾಲ ಪಡೆಯುವ ಉದ್ದೇಶದಿಂದ ವಾರ್ಷಿಕ ಆದಾಯ ಹೆಚ್ಚು ತೋರಿಸಿರುವ ಕಾರಣಕ್ಕೆ ಅನರ್ಹ ಪಟ್ಟಿಗೆ ಸೇರಿಸಿರುವ ಕುಟುಂಬಗಳ ಬಗ್ಗೆ ಸರ್ಕಾರ ಪುನರ್ ಪರಿಶೀಲನೆ ನಡೆಸಿದೆಯೇ; | |
| ಉ | ಆಯುಷ್ಮಾನ್ ಯೋಜನೆಯಡಿ ಹಿರಿಯ ನಾಗರಿಕರು ಸೌಲಭ್ಯ ಪಡೆಯಲು ಎಪಿಎಲ್ ಕಾರ್ಡ್ ಅಗತ್ಯವಿರುವ ಹಿನ್ನೆಲೆಯಲ್ಲಿ ಹೊಸ ಕಾರ್ಡ್ ಇಲ್ಲದೆ ಉಂಟಾಗುತ್ತಿರುವ ತೊಂದರೆಯನ್ನು ಪರಿಹರಿಸಲು ಸರ್ಕಾರದ ಕ್ರಮವೇನು; | ಸರ್ಕಾರದ ಆದೇಶ ಸಂಖ್ಯೆ: ಆನಾಸ 211 ಡಿಆರ್‌ಎ 2021 ದಿನಾಂಕ:29.09.2023 ರಲ್ಲಿಆದ್ಯತೇತರ ಪಡಿತರ ಚೀಟಿಯನ್ನು ಕೋರಿ ಸಲ್ಲಿಕೆಯಾಗಿರುವ ಅರ್ಜಿಗಳಿಗೆ ಅನುಮೋದನೆ ನೀಡುವುದನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿರುತ್ತದೆ. |
| ಊ | ತಾಂತ್ರಿಕ ಕಾರಣದಿಂದ ಹೊಸ ಕಾರ್ಡ್ ವಿತರಣೆ ತಡೆಹಿಡಿದಿದ್ದು, ಅರ್ಹತೆಯಿದ್ದರೂ ಕಾರ್ಡ್ ರಹಿತರಾಗಿರುವ ಕುಟುಂಬಗಳಿಗೆ ತಾತ್ಕಾಲಿಕ ಅಥವಾ ಮಧ್ಯಂತರ ವ್ಯವಸ್ಥೆಯ ಮೂಲಕ ಸೌಲಭ್ಯ ನೀಡಲು ಸರ್ಕಾರದಿಂದ ಯಾವಾಗ ಕ್ರಮ ಕೈಗೊಳ್ಳಲಾಗುವುದು? | ಸರ್ಕಾರದ ಆದೇಶ ಸಂಖ್ಯೆ: ಇ-ಆನಾಸ 159 ಡಿಆರ್‌ಎ 2025 ದಿನಾಂಕ:30.10.2025 ರನ್ವಯ ದಿನಾಂಕ 28.11.2025 ರ ಅಂತ್ಯಕ್ಕೆ ರಾಜ್ಯದಲ್ಲಿ ಆದ್ಯತಾ ಪಡಿತರ ಚೀಟಿ ಕೋರಿ ಈಗಾಗಲೇ ಸಲ್ಲಿಸಿರುವ ಒಟ್ಟು 3,36,982 ಅರ್ಜಿಗಳ ಸ್ಥಳ ತನಿಖೆ ಕಾರ್ಯ ನಡೆಸಿ ಅರ್ಹರಿರುವ ಅರ್ಜಿದಾರರಿಗೆ ನಿಯಮಾನುಸಾರ ಆದ್ಯತಾ ಪಡಿತರ ಚೀಟಿ ವಿತರಣೆ ಮಾಡಲು ಕ್ರಮವಹಿಸಲಾಗಿರುತ್ತದೆ. |

ಇ- ಆನಾಸ 71 ಡಿಆರ್‌ಎ 2026

(ಕೆ.ಹೆಚ್. ಮುನಿಯಪ್ಪ)
ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ
ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ
ಇಲಾಖಾ ಸಚಿವರು